**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ/160/ಗ್ರಾಪಂಸಿ/2018

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:20-11-2018

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
**ಬೆಂಗಳೂರು.**

**ಇವರಿಗೆ:**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು,

2) ಉಪಕಾರ್ಯದರ್ಶಿಗಳು (ಅಭಿವೃದ್ಧಿ)
ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.

ಮಾನ್ಯರೆ,

ವಿಷಯ: ಪದವಿಪೂರ್ವ ಶಿಕ್ಷಣ ಇಲಾಖೆಯು ನಡೆಸುವ ದ್ವಿತೀಯ ಪಿ.ಯು.ಸಿ. ಪರೀಕ್ಷೆಗೆ ಖಾಸಗಿಯಾಗಿ ನೊಂದಾಯಿಸಿ ಉತ್ತೀರ್ಣರಾಗುವ ವಿದ್ಯಾರ್ಥಿಗಳು ಎರಡು ವರ್ಷದ ಪಿ.ಯು.ಸಿ.. ಗೆ ತತ್ಸಮಾನವೆಂದು ಘೋಷಿಸಿರುವುದರಿಂದ ಪರಿಗಣಿಸುವ ಬಗ್ಗೆ.

ಉಲ್ಲೇಖ:
1. ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ಸುತ್ತೋಲೆ ಸಂಖ್ಯೆ:ಸಿಆಸುಇ 81 ಸೇವನೆ 2017, ದಿನಾಂಕ:27-02-2018.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕೊಪ್ಪಳ ರವರ ಪತ್ರ ಸಂಖ್ಯೆ:ಜಿಪಂಕೊ/ಸಿಬ್ಬಂದಿ-1/ಸಿ.ಆರ್-65/2018-19/1468 ದಿ:24-09-2018.
3. ಶಿಕ್ಷಣ ಇಲಾಖೆ (ಪದವಿ ಪೂರ್ವ) ರವರ ಸರ್ಕಾರದ ಆದೇಶ ಸಂಖ್ಯೆ:ಇಡಿ 114 ಟಿಪಿಯು 2014 ದಿನಾಂಕ:19-01-2015.

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯು ದಿನಾಂಕ:27-02-2018 ರಂದು ಹೊರಡಿಸಿರುವ ಉಲ್ಲೇಖ(1) ರ ಸುತ್ತೋಲೆಯಲ್ಲಿ ಪಿ.ಯು.ಸಿ. ವಿದ್ಯಾರ್ಹತೆಯ ತತ್ಸಮಾನ ವಿದ್ಯಾರ್ಹತೆಗಳನ್ನು ನಿರ್ದಿಷ್ಟಪಡಿಸಲಾಗಿದೆ. ಉಲ್ಲೇಖ(3) ರ ಶಿಕ್ಷಣ ಇಲಾಖೆಯ ಆದೇಶದಲ್ಲಿ ಪದವಿಪೂರ್ವ ಶಿಕ್ಷಣ ಇಲಾಖೆಯು ನಡೆಸುವ ದ್ವಿತೀಯ ಪಿ.ಯು.ಸಿ. ಪರೀಕ್ಷೆಗೆ ಖಾಸಗಿಯಾಗಿ ನೊಂದಾಯಿಸಿ ಉತ್ತೀರ್ಣರಾಗುವ ವಿದ್ಯಾರ್ಥಿಗಳು ಎರಡು ವರ್ಷದ ಪಿ.ಯು.ಸಿ. ಗೆ ತತ್ಸಮಾನವೆಂದು ಘೋಷಿಸಲಾಗಿದೆ.

ಆದುದರಿಂದ ಗ್ರಾಮ ಪಂಚಾಯತಿಗಳ ಬಿಲ್‌ಕಲೆಕ್ಟರ್ ಇತ್ಯಾದಿ ವೃಂದದಿಂದ ಗ್ರಾಮ ಪಂಚಾಯತಿ ಕಾರ್ಯದರ್ಶಿ ಗ್ರೇಡ್-2 ಹುದ್ದೆಗೆ ಪದವಿಪೂರ್ವ ಶಿಕ್ಷಣ ಇಲಾಖೆಯು ನಡೆಸುವ ದ್ವಿತೀಯ ಪಿ.ಯು.ಸಿ. ಪರೀಕ್ಷೆಗೆ ಖಾಸಗಿಯಾಗಿ ನೊಂದಾಯಿಸಿ ಉತ್ತೀರ್ಣರಾಗುವ ವಿದ್ಯಾರ್ಥಿಗಳು ಎರಡು ವರ್ಷದ ಪಿ.ಯು.ಸಿ. ಗೆ ತತ್ಸಮಾನವೆಂದು ಘೋಷಿಸಿರುವುದರಿಂದ ಪರಿಗಣಿಸುವ ಬಗ್ಗೆ ಕ್ರಮವಹಿಸುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

20/11

(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಪ್ರತಿ ಮಾಹಿತಿ ಅಗತ್ಯ ಕ್ರಮಕ್ಕಾಗಿ:-</u>

1) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
2) ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.